# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 908(1043)
2) ಸದಸ್ಯರ ಹೆಸರು : ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
3) ಉತ್ತರಿಸುವ ದಿನಾಂಕ : 19.12.2018
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಇತ್ತೀಚೆಗೆ ಕಾಡು ಪ್ರಾಣಿಗಳಿಂದ ಗ್ರಾಮೀಣ ಮತ್ತು ನಗರ ಪ್ರದೇಶಗಳ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು.</td></tr>
<tr><td>ಆ)</td><td>ಕಳೆದ 5 ವರ್ಷಗಳಲ್ಲಿ ಮಾನವನ ಮೇಲೆ ಕಾಡು ಪ್ರಾಣಿಗಳು ದಾಳಿ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಕಳೆದ 5 ವರ್ಷಗಳಲ್ಲಿ 1092 ಪ್ರಕರಣಗಳಲ್ಲಿ ವನ್ಯಪ್ರಾಣಿಗಳು ಮಾನವನ ಮೇಲೆ ದಾಳಿ ಮಾಡಿರುತ್ತವೆ. ವಿವರ ಕೆಳಗಿನಂತಿದೆ.
<table>
<tr><th>ವರ್ಷ</th><th>ಪ್ರಕರಣ ಸಂಖ್ಯೆ</th></tr>
<tr><td>2013-14</td><td>236</td></tr>
<tr><td>2014-15</td><td>264</td></tr>
<tr><td>2015-16</td><td>214</td></tr>
<tr><td>2016-17</td><td>184</td></tr>
<tr><td>2017-18</td><td>194</td></tr>
<tr><td>ಒಟ್ಟು:</td><td>1092</td></tr>
</table></td></tr>
<tr><td>ಇ)</td><td>ಇದರಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಮೇಲ್ಕಂಡ ಪ್ರಕರಣಗಳಲ್ಲಿ ವನ್ಯಪ್ರಾಣಿಗಳ ದಾಳಿಯಿಂದ 259 ಜನರು ಮೃತ ಪಟ್ಟಿರುತ್ತಾರೆ. ವರ್ಷವಾರು ವಿವರ ಕೆಳಗಿನಂತಿದೆ.
<table>
<tr><th>ವರ್ಷ</th><th>ಪ್ರಕರಣ ಸಂಖ್ಯೆ</th></tr>
<tr><td>2013-14</td><td>68</td></tr>
<tr><td>2014-15</td><td>53</td></tr>
<tr><td>2015-16</td><td>47</td></tr>
<tr><td>2016-17</td><td>49</td></tr>
<tr><td>2017-18</td><td>42</td></tr>
<tr><td>ಒಟ್ಟು:</td><td>259</td></tr>
</table></td></tr>
<tr><td>ಈ)</td><td>ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಶಾಶ್ವತ ಪರಿಹಾರ ಹಾಗೂ ಮುನ್ನೆಚ್ಚರಿಕಾ ಕ್ರಮಗಳೇನು? ವಿವರ ನೀಡುವುದು.</td><td>ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರವು ಈ ಕೆಳಕಂಡ ಪ್ರಮುಖ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1) ಸೌರಶಕ್ತಿ ಬೇಲಿ ನಿರ್ಮಾಣ/ ನಿರ್ವಹಣೆ<br>2) ಆನೆ ತಡೆ ಕಂದಕ ನಿರ್ಮಾಣ/ನಿರ್ವಹಣೆ<br>3) ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಕೆರೆಗಳ ನಿರ್ಮಾಣ/ನಿರ್ವಹಣೆ</td></tr>
</table>

| | | |
|---|---|---|
| | | 4) ಬೇಟೆ ತಡೆ ಶಿಬಿರ ಹಾಗೂ ಕ್ಷಿಪ್ರ ಸ್ಪಂದನ ಪಡೆ (Rapid Response Teams) ತಂಡಗಳಿಗೆ ನಿಸ್ತಂತು ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>5) ವನ್ಯಪ್ರಾಣಿಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br>6) ವನ್ಯಪ್ರಾಣಿಗಳ ಚಲನ-ವಲನದ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br>7) ಕಾಡಾನೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಆನೆ ಗುಂಪುಗಳ ಒಂದೊಂದು ಗುಂಪಿನ ಒಂದು ವಯಸ್ಕ ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸಿ, 24 ಗಂಟೆ ಆನೆ ಹಿಂಡಿನ ಚಲನ-ವಲನಗಳ ಮೇಲೆ ನಿಗಾ ವಹಿಸಿ, ಸದರಿ ಆನೆಗಳು ಯಾವ ಯಾವ ಪ್ರದೇಶಗಳಲ್ಲಿ ಚಲಿಸುತ್ತಿವೆ ಎಂಬ ವಿಷಯವನ್ನು ಎಸ್.ಎಂ.ಎಸ್. ಮುಖಾಂತರ ಸ್ಥಳೀಯ ಜನರಿಗೆ ಆಗಿಂದಾಗ್ಗೆ ಮಾಹಿತಿ ನೀಡಲಾಗುತ್ತಿದೆ.<br>8) ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಕಾಡಾನೆಗಳನ್ನು ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಕಳುಹಿಸಲಾಗಿರುತ್ತದೆ.<br>9) ರೈತರಿಗೆ ಸೋಲಾರ್ ಬೇಲಿ ನಿರ್ಮಾಣಕ್ಕೆ ಶೇ 50ರಷ್ಟು ಧನ ಸಹಾಯವನ್ನು ಇಲಾಖೆಯಿಂದ ನೀಡಲಾಗುತ್ತಿದೆ. |

ಸಂಖ್ಯೆ: ಅಪಜೀ 196 ಎಫ್‌ಡಬ್ಲ್ಯೂಎಲ್ 2018

(ಆರ್. ಶಂಕರ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು